**<u>ಎರಡನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂಃ ನ್ಯಾಯಾಲಯ, ಮದ್ದೂರು.</u>**

**<u>ಸಿಸಿ 1159/2015</u>**

| | | | |
|---|---|---|---|
| ಸಾಕ್ಷಿದಾರರ ಹೆಸರು | - ದೇವರಾಜು | | ಚಾ.ಸಾ-20 |
| ತಂದೆಯ ಹೆಸರು | - ಸಿದ್ದಾಚಾರಿ | | ಪ್ರಾ.ಸಾ-7 |
| ವಯಸ್ಸು | - 30 ವರ್ಷ | | |
| ಉದ್ಯೋಗ | - ಟೈಲರ್ | | |
| ವಾಸಸ್ಥಳ | - ವೈದ್ಯನಾಥಪುರ | | |

ದಿನಾಂಕಃ 04-05-2024 ರಂದು ಪ್ರಮಾಣ ವಚನ ಬೋಧಿಸಲಾಯಿತು.

**<u>ಮುಖ್ಯ ವಿಚಾರಣೆ:ಅಭಿಯೋಜನೆಯ ಪರಃ ಎಪಿಪಿ ಯವರಿಂದ:</u>**

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲೆ ಅಮಾನತ್ತು ಮಹಜರ್ ಆಗಿದ್ದು, ಅದನ್ನು ನಿಪಿ-6 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-6 ಎ ಎಂದು ಗುರುತಿಸಲಾಯಿತು. ಸದರೀ ಸಹಿಯನ್ನು ಸುಮಾರು 5-6 ವರ್ಷಗಳ ಹಿಂದೆ ಕೆನರಾ ಬ್ಯಾಂಕ್ ಬಳಿ ಮಾಡಿರುತ್ತೇನೆ. ನಿ.ಪಿ. 6 ದಾಖಲೆಗೆ ಸಹಿ ಮಾಡಿದಾಗ ನನ್ನನ್ನು ಹೊರತುಪಡಿಸಿ ಬೇರೆ ಯಾರು ಸಹಿ ಮಾಡಿರುತ್ತಾರೆಂದು ಗೊತ್ತಿಲ್ಲ. ಪೋಲೀಸರು ನನ್ನ ಸಮಕ್ಷಮದಲ್ಲಿ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸದರಿ ಸಾಕ್ಷಿದಾರರನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲುಃ ಮಾನ್ಯ ಎ ಪಿ ಪಿ ಯವರಿಂದಃ</u>**

ದಿನಾಂಕಃ 26.09.2013 ರಂದು ಬೆಳಗ್ಗೆ 11.00 ರಿಂದ 11.30 ರವರಗೆ ಮದ್ದೂರು

ಟೌನ್ ಪೇಟೆ ಬೀದಿಯ ಹಳೇ ಎಂ ಸಿ ರಸ್ತೆಯಲ್ಲಿರುವ ಕೆನರಾ ಬ್ಯಾಂಕ್ ಶಾಖೆಯಲ್ಲಿ ನಿಮ್ಮ ಹಾಗೂ ಚಾ,ಸಾ. 18 ಮತ್ತು 19 ರವರ ಸಮಕ್ಷಮ ನಿ.ಪಿ. 6 ರಂತೆ ಮಹಜರ್ ಕ್ರಮ ಜರುಗಿಸಿ ಎಸ್ 11 ರಿಂದ ಎಸ್ 14 ರವರೆಗಿನ ದಾಖಲಾತಿಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿಯ ಲ್ಲ. ನಿ.ಪಿ. 6 ರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಏನೂ ಇಲ್ಲ.**

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸರಿಯಾಗಿದೆಂದು ಒಪ್ಪಿರುತ್ತಾರೆ.

2 ನೇ ಅಪರ ಸಿವಿಲ್ ಮತ್ತು

ಸಾಕ್ಷಿ ಸಹಿಃ

ಜೆ.ಎಂ.ಎಫ್.ಸಿ. ನ್ಯಾಯಾಧೀಶರು, ಮದ್ದೂರು.